## ಅಧಿಕ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ, ಶಿರಾ.

## ಪ್ರಕರಣ ಸಂಖ್ಯೆಃ 07/2026

**ದಿನಾಂಕಃ 25.02.2026** ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಭೋದಿಸಲಾಯಿತು.

| | | | |
|---|---|---|---|
| ಸಿಡಬ್ಲ್ಯೂಃ | 6 | ಪಿಡಬ್ಲ್ಯೂ | 6 |
| ಹೆಸರು | ಕೆಂಚಪ್ಪ | | |
| ತಂದೆ / ಗಂಡನ ಹೆಸರು | ತಿಮ್ಮಯ್ಯ | | |
| ವಯಸ್ಸು | 74 | | |
| ಉದ್ಯೋಗ | ವ್ಯವಸಾಯ | | |
| ವಾಸ | ಕೆ. ರಂಗನಹಳ್ಳಿ | | |

### ಮುಖ್ಯ ವಿಚಾರಣೆಃ ಎ ಪಿ ಪಿ ರವರಿಂದಃ

ನ್ಯಾಯಾಲಯದ ಮುಂದಿರುವ ಆರೋಪಿಗಳು ಮತ್ತು ಚಾಸಾ 1 ರಿಂದ 4 ಮತ್ತು 6 ರವರ ಒಂದೇ ಊರಿನವರಾಗಿರುವುದರಿಂದ ಪರಿಚಯ ಇರುತ್ತಾರೆ.

2. ಸಾಕ್ಷಿಯು ನಿಪಿ 2 ರ ಪಂಚನಾಮೆಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸದರಿ ಸಹಿಯನ್ನು ನಿಪಿ 2 (ಬಿ) ಎಂದು ಗುರುತಿಸಲಾಯಿತು. ನಿಪಿ 2 ರ ಪಂಚನಾಮೆಯ ಸಹಿಯನ್ನು ಸುಮಾರು 2 ವರ್ಷಗಳ ಹಿಂದೆ ನನಗೆ ಗೊತ್ತಿಲದೆಯೇ ಚಾಸಾ 1 ರವರು ಸಹಿಯನ್ನು ಪಡೆದುಕೊಂಡಿರುತ್ತಾರೆ. ನಿಪಿ 2 ರ ಪಂಚನಾಮೆಯಲ್ಲಿ ಬರೆದಿರುವ ಅಂಶಗಳು ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಎಪಿಪಿ ರವರು ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿರುತ್ತಾರೆ. ಸಾಕ್ಷಿಯನ್ನು ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)

### ಪಾಟೀ ಸವಾಲುಃ ಎ ಪಿ ಪಿ ರವರಿಂದಃ

ದಿಃ 08.11.2015 ರಂದು ಚಾಸಾ 1 ರವರು ತೋರಿಸಿದ ಸ್ಥಳದಲ್ಲಿ ಪೊಲೀಸರು ಸಂಜೆ 4.30 ರಿಂದ 5.30 ರವರೆಗೆ ನನ್ನ ಮತ್ತು ಚಾಸಾ 3 ರವರ ಸಮಕ್ಷಮ ಸ್ಥಳ ಪಂಚನಾಮೆ ಮಾಡಿ ಕಲ್ಲು

ಮತ್ತು ದ್ವಿಚಕ್ರ ವಾಹನವನ್ನು ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಾನು ಘಟನಾ ಸ್ಥಳದಲ್ಲಿ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ನಾನು ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿಯನ್ನು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ ಇಲ್ಲ**

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಕಂಪ್ಯೂಟರೀಕರಣಗೊಳಿಸಿ ಪ್ರಿಂಟ್ ತೆಗೆಯಲಾಯಿತು.)

ಓ. ಹೇ. ಕೇ. ಸರಿ. ಇದೆ.

ಅಪರ ಹಿ.ಸಿ.ಜೆ ಮತ್ತು ಜೆ.ಎಮ್.ಎಫ್.ಸಿ.
ಶಿರಾ.